## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 17(35) |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾಗಿದ ದಿನಾಂಕ | : | 13.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ನಗರಸಭೆ ಕಟ್ಟಡ ನಿರ್ಮಾಣಕ್ಕಾಗಿ ನಗರೋತ್ಥಾನ 4ರಲ್ಲಿ ಮಂಜೂರಾಗಿರುವ ಅನುದಾನದ ಮೊತ್ತವೆಷ್ಟು; | ಕೋಲಾರ ನಗರಸಭೆ ಕಟ್ಟಡ ನಿರ್ಮಾಣಕ್ಕಾಗಿ ಮುಖ್ಯಮಂತ್ರಿಗಳ ಅಮೃತ (ನಗರೋತ್ಥಾನ) ಯೋಜನೆ (ಹಂತ-4) ಯಲ್ಲಿ ರೂ.783.09 ಲಕ್ಷಗಳನ್ನು ಮಂಜೂರು ಮಾಡಲಾಗಿದೆ. |
| ಆ) | ಈಗಾಗಲೇ ಟೆಂಡರ್ ಪ್ರಕ್ರಿಯೆಯು ಪೂರ್ಣಗೊಂಡಿದ್ದು, ಬೆಂಗಳೂರಿನ ಸಾನ್ವಿಪ್ರಿಯ ಬಿಲ್ಡ್‌ಟೆಕ್ ಕಂಪನಿಗೆ ಕಾರ್ಯಾದೇಶ ನೀಡಿರುವುದು ನಿಜವೇ; ಹಾಗಿದ್ದಲ್ಲಿ, ಇದುವರೆವಿಗೂ ಕಟ್ಟಡ ಕಾಮಗಾರಿ ಪ್ರಾರಂಭಗೊಳ್ಳದಿರಲು ಕಾರಣವೇನು; | ಕೋಲಾರ ನಗರಸಭೆಯ ನೂತನ ಕಛೇರಿ ಕಟ್ಟಡ ನಿರ್ಮಾಣಕ್ಕಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶ, ಕೋಲಾರ ಕಛೇರಿಯಿಂದ ದಿನಾಂಕ:16-08-2023 ರಂದು ಗುತ್ತಿಗೆದಾರರಾದ ಮೆ॥ ಸಾನ್ವಿಪ್ರಿಯ ಬಿಲ್ಡ್ ಟೆಕ್ ಕಂಪನಿಗೆ ಕಾರ್ಯಾದೇಶ ನೀಡಲಾಗಿರುತ್ತದೆ.<br><br>ಕಟ್ಟಡ ನಿರ್ಮಾಣದ ನಿವೇಶನದಲ್ಲಿ ಮರಗಳು ಮತ್ತು ಶೆಡ್‌ಗಳು ಇದ್ದ ಕಾರಣ ಇವುಗಳನ್ನು ನಗರಸಭೆ ವತಿಯಿಂದ ತೆರವುಗೊಳಿಸಿದ ನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. ನಂತರ ಕೋಲಾರ ವಿಧಾನಸಭೆಯ ಮಾನ್ಯ ಶಾಸಕರು ಮತ್ತು ಮಾನ್ಯ ವಿಧಾನ ಪರಿಷತ್ ಸದಸ್ಯರು ರವರುಗಳು ಕಛೇರಿ ಕಟ್ಟಡ ವಿನ್ಯಾಸವನ್ನು ಬದಲಿಸುವಂತೆ ಸೂಚಿಸಿರುವ ಮೇರೆಗೆ ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |
| ಇ) | ಗುತ್ತಿಗೆ ಪಡೆದಿರುವ ಸಾನ್ವಿಪ್ರಿಯ ಬಿಲ್ಡ್‌ಟೆಕ್ ಕಂಪನಿ ಗುತ್ತಿಗೆದಾರ 4 ವರ್ಷಗಳ ಹಿಂದೆ ನಗರಸಭೆಯ ಅಮೃತ್ ಯೋಜನೆಯಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಚರಂಡಿ ಕಾಮಗಾರಿ ಕೈಗೊಂಡಿದ್ದು, ಈ ಕಾಮಗಾರಿ ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೆ॥ಸಾನ್ವಿಪ್ರಿಯ ಬಿಲ್ಡ್ ಟೆಕ್ ಪ್ರೈ.ಲಿ ಕಂಪನಿ ಯವರು ಕೋಲಾರ ನಗರಸಭೆಯ ವ್ಯಾಪ್ತಿಯಲ್ಲಿ ಅಮೃತ್ ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಕಳಪೆಯಾಗಿರುವುದರಿಂದ ಲೋಕಾಯುಕ್ತ ಕಛೇರಿಯಲ್ಲಿ ದೂರು ದಾಖಲಾಗಿದ್ದು, ಸದರಿ ದೂರಿನ ಬಗ್ಗೆ ಆರೋಪವು ಸಾಬೀತಾಗಿರುವುದಿಲ್ಲ ಹಾಗೂ ಗುತ್ತಿಗೆದಾರರು ನಿರ್ವಹಿಸಿರುವ ಕಾಮಗಾರಿಗಳು ತೃಪ್ತಿಕರವಾಗಿರುವ ಹಿನ್ನೆಲೆಯಲ್ಲಿ, ಜಿಲ್ಲಾ ನಗರಾಭಿವೃದ್ಧಿ ಕೋಶದಿಂದ ಈಗಾಗಲೇ ಟೆಂಡರ್ ಕರೆದು ಕಾರ್ಯಾದೇಶ ನೀಡಲಾಗಿರುತ್ತದೆ. ಗುತ್ತಿಗೆ ದಸ್ತಾವೇಜಿನಂತೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು. |
| ಈ) | ಬಂದಿದ್ದಲ್ಲಿ, ಗುತ್ತಿಗೆದಾರರನ್ನು ಬದಲಿಸಿ ಬೇರೆ ಟೆಂಡರ್ ಕರೆದು ಶೀಘ್ರವಾಗಿ ನಗರಸಭೆ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರ ಚಿಂತನೆ ನಡೆಸಿದೆಯೇ? | |

ಕಡತ ಸಂಖ್ಯೆ:ನಅಇ 23 ಸಮಸ 2023

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು